# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 1781 (2018)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

ವಿಷಯ : ಮೀನುಗಾರಿಕೆ ಇಲಾಖೆಯಿಂದ ಮೀನು ಸಾಕಾಣಿಕೆ ಹಾಗೂ ಮತ್ಸ್ಯಾಶ್ರಯ ಯೋಜನೆಯಡಿ ಮನೆಗಳ ಹಂಚಿಕೆ ಕುರಿತು

(ಅ) 2019-20ನೇ ಸಾಲಿನಲ್ಲಿ ಕಾರವಾರ ಜಿಲ್ಲೆಯಲ್ಲಿ ಮೀನುಗಾರಿಕೆ ಇಲಾಖೆ ವತಿಯಿಂದ ಮೀನು ಮರಿಗಳನ್ನು ಕೆರೆಗಳಲ್ಲಿ ಸಾಕಾಣೆ ಮಾಡಲು ಅನುಸರಿಸಲಾಗಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಕೆರೆಗಳಲ್ಲಿ/ಡ್ಯಾಂ/ಕಟ್ಟೆಗಳಲ್ಲಿ ಮೀನು ಸಾಕಾಣಿಕೆಗಾಗಿ ನೀಡಿರುವ ಅನುದಾನವೆಷ್ಟು; (ವರ್ಷವಾರು ಹಾಗೂ ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಕಳೆದ ಮೂರು ವರ್ಷಗಳಿಂದ ಎಷ್ಟು ಕೆರೆಗಳಲ್ಲಿ/ಡ್ಯಾಂ/ಕಟ್ಟೆಗಳಲ್ಲಿ ಮೀನು ಸಾಕಾಣಿಕೆ ಟೆಂಡರ್ ಕರೆಯಲಾಗಿದೆ ; (ವರ್ಷವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಅವಧಿಯಲ್ಲಿ ಮೀನು ಸಾಕಾಣಿಕೆಗಾಗಿ ಸರ್ಕಾರದಿಂದ ಯಾವ ಯಾವ ಯೋಜನೆಗಳಲ್ಲಿ ಎಷ್ಟೆಷ್ಟು ಅನುದಾನವನ್ನು ನೀಡಲಾಗಿದೆ; (ವರ್ಷವಾರು ಹಾಗೂ ಕಾರವಾರ ಜಿಲ್ಲೆಯ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ಕಾರವಾರ ಜಿಲ್ಲೆಯಲ್ಲಿ 2019-20ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆ ವತಿಯಿಂದ ಮತ್ಸ್ಯಾಶ್ರಯ ಯೋಜನೆಯಡಿಯಲ್ಲಿ ಮಂಜೂರು ಮಾಡಲಾಗಿರುವ ಮನೆಗಳೆಷ್ಟು; ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸಲಾಗಿರುವ ಮಾನದಂಡಗಳೇನು? (ಕಾರವಾರ ಜಿಲ್ಲೆಯ ತಾಲ್ಲೂಕುವಾರು ಸಂಪೂರ್ಣ ಮಾಹಿ ನೀಡುವುದು)